# ಕರ್ನಾಟಕ ಸರ್ಕಾರ

ಸಂಖ್ಯೆ: ಪಸಂಮೀ 49 ಮೀಇಯೋ 2018

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸಸೌಧ
ಬೆಂಗಳೂರು, ದಿನಾಂಕ: 16-07-2018

## ಅಧಿಸೂಚನೆ

ಮತ್ಸ್ಯಸಂಪನ್ಮೂಲದ ರಕ್ಷಣೆಗಾಗಿ ಹಾಗೂ ಸಾಂಪ್ರದಾಯಿಕ ಮೀನುಗಾರರ ಹಿತರಕ್ಷಣೆಗಾಗಿ ಕರ್ನಾಟಕ ಕಡಲ ಮೀನುಗಾರಿಕೆ ಕಾಯ್ದೆಯ ಸೆಕ್ಷನ್ (3)ರ ಸಬ್‌ಸೆಕ್ಷನ್ (1)(ಡಿ) ಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಮೀನುಗಾರಿಕೆಯ ನಿಯಂತ್ರಣಕ್ಕಾಗಿ ಎಲ್ಲಾ ಟ್ರಾಲ್ ಬಲೆಗಳಲ್ಲಿ 35 ಎಂಎಂ ಅಳತೆಯ ಸ್ಕ್ವೇರ್ ಮೆಶ್ ಕಾಡ್ ಎಂಡ್ ಉಪಯೋಗಿಸುವುದನ್ನು ಕಡ್ಡಾಯಗೊಳಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ರಶ್ಮಿ ಶಿವಶಂಕರ ಪೋಳ್)
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
(ಮೀನುಗಾರಿಕೆ)

ಇವರಿಗೆ

1) ಮಹಾಲೇಖಪಾಲರು (ಎ ಮತ್ತು ಇ)(ಆಡಿಟ್ 1 ಮತ್ತು 2), ಕರ್ನಾಟಕ, ಬೆಂಗಳೂರು.
2) ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು.
3) ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳಿಗೆ – ಮೀನುಗಾರಿಕೆ ನಿರ್ದೇಶಕರ ಮುಖಾಂತರ.
4) ಶಾಖಾ ರಕ್ಷಾ ಕಡತ / ಹೆಚ್ಚಿನ ಪ್ರತಿಗಳು / ಸಮನ್ವಯ-ಕಂಪೆಂಡಿಯಂ.

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2018-19ನೇ ಸಾಲಿನಿಂದ "ಟ್ರಾಲ್ ಬಲೆಗಳಿಗೆ 35 ಎಂಎಂ ಅಳತೆಯ ಚೌಕಾಕಾರದ ಕಾಡ್ ಎಂಡ್‌ನ ಉಚಿತ ವಿತರಣೆ" ಎಂಬ ಘಟಕವನ್ನು ಅನುಷ್ಠಾನಗೊಳಿಸಲು ಆಡಳಿತಾತ್ಮಕ ಮಂಜೂರಾತಿ ನೀಡುವ ಬಗ್ಗೆ.

ಓದಲಾಗಿದೆ:- ಪತ್ರ ಸಂಖ್ಯೆ: ಡಿಎಫ್/31/ಪಂವಾಯೋ/2018, ದಿನಾಂಕ: 19-07-2018.

C-6852

******

## ಪ್ರಸ್ತಾವನೆ:

ರಾಜ್ಯ ಸರ್ಕಾರವು 2018-19 ನೇ ಸಾಲಿನ ಫೆಬ್ರವರಿ-2018ರ ಆಯವ್ಯಯ ಭಾಷಣದ ಕಂಡಿಕೆ-68 ರಲ್ಲಿ "ಮೀನುಮರಿಗಳನ್ನು ಹಿಡಿಯುವುದನ್ನು ತಪ್ಪಿಸಿ ಮತ್ಸ್ಯಸಂಪತ್ತನ್ನು ರಕ್ಷಿಸಲು ಟ್ರಾಲ್ ದೋಣಿ ಮೀನುಗಾರರಿಗೆ 35 ಎಂಎಂ ಸ್ಕ್ವೇರ್ ಮೆಶ್ ಕಾಡ್ ಎಂಡ್ ಬಲೆಗಳನ್ನು ಉಚಿತವಾಗಿ ನೀಡಲು ಉದ್ದೇಶಿಸಲಾಗಿದೆ. ಇದಕ್ಕಾಗಿ 2500 ಟ್ರಾಲ್ ದೋಣಿಗಳಿಗೆ ತಲಾ 10000 ರೂ.ಗಳಂತೆ 2.50 ಕೋಟಿ ಅನುದಾನವನ್ನು ಒದಗಿಸಲಾಗುವುದು" ಎಂದು ಘೋಷಿಸಲಾಗಿದೆ.

ಮೇಲೆ ಓದಲಾದ ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು ಇವರ ಪತ್ರದಲ್ಲಿ, 2018-19ನೇ ಸಾಲಿನಿಂದ "ಟ್ರಾಲ್ ದೋಣಿಗಳ ಟ್ರಾಲ್ ಬಲೆಗಳಿಗೆ ಚೌಕಾಕಾರದ ಕಾಡ್ ಎಂಡ್ ಬಲೆಗಳ ಉಚಿತ ವಿತರಣೆ" ಎಂಬ ಹೊಸ ಘಟಕವನ್ನು "ಮೀನುಗಾರಿಕೆ ಸಲಕರಣೆ ಕಿಟ್‌ಗಳ ಸರಬರಾಜು" ಯೋಜನೆಯಡಿ ಅನುಬಂಧದಲ್ಲಿ ನೀಡಿರುವ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟು ಅನುಷ್ಠಾನಗೊಳಿಸಲು ಆಡಳಿತಾತ್ಮಕ ಮಂಜೂರಾತಿ ನೀಡಲು ಕೋರಿರುತ್ತಾರೆ.

ಮೀನುಗಾರಿಕೆ ನಿರ್ದೇಶಕರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ಪಸಂಮೀ 65 ಮೀಇಯೋ 2018, ಬೆಂಗಳೂರು ದಿನಾಂಕ: 05-09-2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2018-19 ನೇ ಸಾಲಿನ ಫೆಬ್ರವರಿ-2018ರ ಆಯವ್ಯಯ ಭಾಷಣದ ಕಂಡಿಕೆ-68 ರಲ್ಲಿನ "ಮೀನುಮರಿಗಳನ್ನು ಹಿಡಿಯುವುದನ್ನು ತಪ್ಪಿಸಿ ಮತ್ಸ್ಯಸಂಪತ್ತನ್ನು ರಕ್ಷಿಸಲು ಮೀನುಗಾರರಿಗೆ ಕಾಡ್ ಎಂಡ್‌ನಲ್ಲಿ 35 ಎಂಎಂ ಸ್ಕ್ವೇರ್ ಮೆಶ್ ಬಲೆಗಳನ್ನು ಉಚಿತವಾಗಿ ನೀಡಲು ಉದ್ದೇಶಿಸಲಾಗಿದೆ. ಇದಕ್ಕಾಗಿ 2500 ಟ್ರಾಲ್ ದೋಣಿಗಳಿಗೆ ತಲಾ 10,000 ರೂ.ಗಳಂತೆ 2.50 ಕೋಟಿ ಅನುದಾನವನ್ನು ಒದಗಿಸಲಾಗುವುದು" ಎಂಬ ಹೊಸ ಕಾರ್ಯಕ್ರಮವನ್ನು ಈ ಆದೇಶದ ಅನುಬಂಧದಲ್ಲಿ ನಮೂದಿಸಿರುವ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು, ಮೀನುಗಾರಿಕೆ ಜಂಟಿ ನಿರ್ದೇಶಕರು, ಮೀನುಗಾರಿಕೆ ಬಂದರು, ಮಲ್ಪೆರವರು ಕೆ.ಟಿ.ಪಿ.ಪಿ. ಕಾಯಿದೆ ಮತ್ತು ನಿಯಮಗಳನ್ನು ಪಾಲಿಸಿ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಸದರಿ ಕಾರ್ಯಕ್ರಮಕ್ಕೆ ಅಗತ್ಯವಿರುವ ರೂ.250.00 ಲಕ್ಷಗಳನ್ನು 2018-19ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ 2405-00-110-0-02-106ರಡಿ ಒದಗಿಸಿರುವ ಅನುದಾನದದಿಂದ ಭರಿಸತಕ್ಕದ್ದು.

ಈ ಆದೇಶವನ್ನು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿ/16/ಪಿಎಫ್ಒ/2018, ದಿನಾಂಕ: 21-05-2018 ಮತ್ತು ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ: ಆಇ/480/ವೆಚ್ಚ-4/2018, ದಿನಾಂಕ: 07-08-2018 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ರಶ್ಮಿ ಶಿವಶಂಕರ ಮೋಳ)
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
(ಮೀನುಗಾರಿಕೆ)

**ಇವರಿಗೆ:**

1) ಪ್ರಧಾನ ಮಹಾಲೇಖಪಾಲರು (ಜಿ&ಎಸ್ಎಸ್ಎ)(ಇ&ಆರ್ಎಸ್ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2) ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
3) ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು.
4) ನಿರ್ದೇಶಕರು (ಪಿಎಫ್‌ಡಿ), ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5) ಜಂಟಿ ನಿರ್ದೇಶಕರು, ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
6) ಸಂಬಂಧಪಟ್ಟ ಮೀನುಗಾರಿಕೆ ಉಪ ನಿರ್ದೇಶಕರುಗಳಿಗೆ – ಮೀನುಗಾರಿಕೆ ನಿರ್ದೇಶಕರ ಮುಖಾಂತರ.
7) ಆಂತರಿಕ ಆರ್ಥಿಕ ಸಲಹೆಗಾರರು, ಕೃ.ತೋ. ಮತ್ತು ಪ.ಸಂ.ಮೀ. ಇಲಾಖೆ.
8) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4), ವಿಧಾನಸೌಧ, ಬೆಂಗಳೂರು.
9) ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
10) ಶಾಖಾ ರಕ್ಷಾ ಕಡತ / ಸಮನ್ವಯ-ಕಂಪೆಂಡಿಯಮ್ / ಹೆಚ್ಚುವರಿ ಪ್ರತಿಗಳು.

**ಆದೇಶ ಸಂಖ್ಯೆ: ಪಸಂಮೀ 65 ಮೀಇಯೋ 2018, ಬೆಂಗಳೂರು ದಿನಾಂಕ: 05-09-2018 ರ**

**ಅನುಬಂಧ**

**"ಟ್ರಾಲ್ ದೋಣಿಗಳ ಟ್ರಾಲ್ ಬಲೆಗಳಿಗೆ ಚೌಕಾಕಾರದ ಕಾಡ್ ಎಂಡ್ ಬಲೆಗಳ ಉಚಿತ ವಿತರಣೆ" ಯೋಜನೆಯ ಅನುಷ್ಠಾನಕ್ಕಾಗಿ**

**ಷರತ್ತು ಮತ್ತು ನಿಬಂಧನೆಗಳು**

**ಫಲಾನುಭವಿ ಆಯ್ಕೆ:**

1. ಅರ್ಜಿದಾರರು ನೋಂದಾಯಿತ ಟ್ರಾಲ್ ದೋಣಿಯನ್ನು ಹೊಂದಿರಬೇಕು.
2. ಟ್ರಾಲ್ ದೋಣಿಯು ಇಲಾಖೆಯಿಂದ ಮೀನುಗಾರಿಕೆ ಪರವಾನಿಗೆ ಮತ್ತು ಡೀಸೆಲ್ ಪಾಸ್‌ಪುಸ್ತಕ ಪಡೆದು ಮೀನುಗಾರಿಕೆಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರತಕ್ಕದ್ದು.
3. ಅರ್ಜಿದಾರರು ಕಡ್ಡಾಯವಾಗಿ ಆಧಾರ್‌ಕಾರ್ಡ್ ಹೊಂದಿರತಕ್ಕದ್ದು.
4. ಫಲಾನುಭವಿಗಳನ್ನು ಅರ್ಜಿ ಸ್ವೀಕರಿಸಿದ ಜೇಷ್ಟತೆಯ ಆಧಾರದ ಮೇಲೆ ಆಯ್ಕೆ ಮಾಡುವುದು.

**ಯೋಜನೆ ಅನುಷ್ಠಾನ ಮಾಡುವ ಕಾರ್ಯವಿಧಾನ:**

1. ಮೀನುಗಾರಿಕೆ ನಿರ್ದೇಶಕರು ನಿಯಮಾನುಸಾರ ಸಾಮಾನ್ಯ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಮಹಿಳೆಯರಿಗೆ ವಲಯವಾರು ಗುರಿ ನಿಗದಿಗೊಳಿಸಿ ಅನುದಾನ ಹಂಚಿಕೆ ಮಾಡುವುದು.
2. ಮೀನುಗಾರಿಕೆ ಉಪ ನಿರ್ದೇಶಕರು ದಿನಪತ್ರಿಕೆಗಳ ಮುಖಾಂತರ ವ್ಯಾಪಕ ಪ್ರಚಾರ ನೀಡಿ, ಅರ್ಜಿಯನ್ನು ಆಹ್ವಾನಿಸುವುದು.
3. ಅರ್ಜಿಗಳನ್ನು ತಾಲ್ಲೂಕಿನ ಮೀನುಗಾರಿಕೆ ಅಧಿಕಾರಿಯವರು ಪರಿಶೀಲಿಸಿ ವಿವರಗಳು ಸರಿಯಿರುವ ಬಗ್ಗೆ ದೃಢೀಕರಿಸಿ, ಜಿಲ್ಲಾ ಮಟ್ಟದ ಅಧಿಕಾರಿಯವರಿಗೆ ಪ್ರಸ್ತಾವನೆಯನ್ನು ಸಲ್ಲಿಸುವುದು.
4. ಸಹಾಯಧನ ಕೋರಿ ಬಂದ ಅರ್ಜಿಗಳನ್ನು, ಜಿಲ್ಲಾ ಮಟ್ಟದ ಮೀನುಗಾರಿಕೆ ಅಧಿಕಾರಿಯು ಮತ್ತೊಮ್ಮೆ ಪರಿಶೀಲಿಸಿ ವಿವರಗಳನ್ನು ದೃಢೀಕರಿಸಿ ಗುರಿಗೆ ತಕ್ಕಂತೆ ಜೇಷ್ಟತೆಯ ಆಧಾರದಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡಿ ಫಲಾನುಭವಿಗಳ ಪಟ್ಟಿಯೊಂದಿಗೆ ಮೀನುಗಾರಿಕೆ ಉಪನಿರ್ದೇಶಕರಿಗೆ ಮಂಜೂರಾತಿಗೆ ಸಲ್ಲಿಸುವುದು.
5. ಮೀನುಗಾರಿಕೆ ಉಪನಿರ್ದೇಶಕರು ಫಲಾನುಭವಿಗಳನ್ನು ಅನುಮೋದಿಸುವ ಅಧಿಕಾರ ಹೊಂದಿರುತ್ತಾರೆ.

6. ಮೀನುಗಾರಿಕೆ ಉಪನಿರ್ದೇಶಕರು ಸಲಕರಣೆಗಳನ್ನು ಖರೀದಿಸಲು ಕರ್ನಾಟಕ ಪಾರದರ್ಶಕ ಅಧಿನಿಯಮ 2000 ಮತ್ತು ಅದರಡಿಯಲ್ಲಿನ ನಿಯಮಗಳ ಪ್ರಕಾರ e-procurement ಮೂಲಕ ಟೆಂಡರ್ ಕರೆದು ಸರಬರಾಜುದಾರರನ್ನು ಅನುಮೋದಿಸುವುದು. ಖರೀದಿ ಸಂಬಂಧ ಇರುವ ಸರ್ಕಾರದ ಸ್ಥಾಯಿ ಆದೇಶ ಮತ್ತು ಸೂಚನೆಗಳನ್ನು ಪಾಲನೆ ಮಾಡುವುದು.

7. ಟೆಂಡರ್‌ದಾರರು ಚೌಕಾಕಾರದ ಕಾಡ್ ಎಂಡ್ ಬಲೆಯ ಗುಣಮಟ್ಟದ ಬಗ್ಗೆ ಕೇಂದ್ರೀಯ ಮೀನುಗಾರಿಕೆ ತಂತ್ರಜ್ಞಾನ ಸಂಸ್ಥೆ (CIFT) ದೃಢೀಕರಿಸಿದ Technical Specification ನಂತೆ ಖರೀದಿಸಲು ಕ್ರಮ ಜರುಗಿಸುವುದು.

8. ತಾಲ್ಲೂಕು ಮಟ್ಟದ ಮೀನುಗಾರಿಕೆ ಇಲಾಖೆಯ ಅಧಿಕಾರಿಗಳು ಮಂಜೂರಾತಿ ಆದೇಶದಂತೆ ಅಗತ್ಯವಿರುವ ಸಂಖ್ಯೆಯ ಹಾಗೂ ಗುಣಮಟ್ಟದ ಕಾಡ್‌ಎಂಡ್‌ಗಳನ್ನು ಸರಬರಾಜು ಮಾಡಲು ಸರಬರಾಜುದಾರರಿಗೆ ಸರಬರಾಜು ಆದೇಶ ನೀಡುವುದು.

9. ಸರಬರಾಜು ಆದನಂತರ ತಾಲ್ಲೂಕು ಮಟ್ಟದ ಅಧಿಕಾರಿಗಳು ಸಲ್ಲಿಸುವ ಸಾಧಿಲ್ವಾರು ಬಿಲ್ಲುಗಳನ್ನು ಜಿಲ್ಲಾ ಮಟ್ಟದ ಅಧಿಕಾರಿಗಳು ಮೇಲುರುಜುಗೊಳಿಸುವುದು.

10. ಸಲಕರಣೆಗಳನ್ನು ಸ್ಥಳೀಯ ಶಾಸಕರು/ಸ್ಥಳೀಯ ಸಂಸ್ಥೆಗಳ ಸದಸ್ಯರ ಸಮ್ಮುಖದಲ್ಲಿ ಫಲಾನುಭವಿಗಳಿಗೆ ವಿತರಣೆ ಮಾಡುವುದು.

11. ಫಲಾನುಭವಿಯು ಎರಡು ವರ್ಷಕ್ಕೊಮ್ಮೆ ಈ ಯೋಜನೆಯಡಿ ಸವಲತ್ತುಗಳನ್ನು ಪಡೆಯಲು ಅರ್ಹರಾಗಿರುತ್ತಾರೆ.

12. ಯೋಜನೆಯ ಸಮರ್ಪಕ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಷರತ್ತು ಮತ್ತು ನಿಬಂಧನೆಗಳನ್ನು ಬದಲಾವಣೆ ಮಾಡುವ ಹಕ್ಕು ಇಲಾಖೆಗಿರುತ್ತದೆ.

13. ಯೋಜನೆಯ ಅನುಷ್ಠಾನದ ನಂತರ ಫಲಾನುಭವಿಗಳ ಪಟ್ಟಿಯನ್ನು ಮೀನುಗಾರಿಕೆ ನಿರ್ದೇಶನಾಲಯಕ್ಕೆ ಸಲ್ಲಿಸುವುದು.

(ರಶ್ಮಿ ಶಿವಶಂಕರ ಪೋಳ)
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
(ಮೀನುಗಾರಿಕೆ)

# ಕರ್ನಾಟಕ ಸರ್ಕಾರ

ಸಂಖ್ಯೆ:ಪಸಂಮೀ 65 ಮೀಇಯೋ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ
ಬೆಂಗಳೂರು, ದಿನಾಂಕ: 26-10-2018

## ತಿದ್ದುಪಡಿ

ಸಂಖ್ಯೆ: ಪಸಂಮೀ/65/ಮೀಇಯೋ/2018, ದಿನಾಂಕ: 05-09-2018ರ ಆದೇಶದ ಅನುಬಂಧದಲ್ಲಿನ ಷರತ್ತು ಮತ್ತು ನಿಬಂಧನೆಗಳಲ್ಲಿ ಕ್ರಮ ಸಂಖ್ಯೆ 6 ರಲ್ಲಿರುವ ಮೀನುಗಾರಿಕೆ ಉಪ ನಿರ್ದೇಶಕರು ಎಂಬುದರ ಬದಲಾಗಿ ಮೀನುಗಾರಿಕೆ ಜಂಟಿ ನಿರ್ದೇಶಕರು ಎಂದು ತಿದ್ದಿ ಓದಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ರಶ್ಮಿ ಶ್ರೀಕಾಂತ ಗಜರೆ)
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
(ಮೀನುಗಾರಿಕೆ)

ಇವರಿಗೆ:

1) ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ)(ಇ&ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2) ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
3) ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು.
4) ನಿರ್ದೇಶಕರು (ಪಿಎಫ್‌ಡಿ), ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5) ಜಂಟಿ ನಿರ್ದೇಶಕರು, ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
6) ಸಂಬಂಧಪಟ್ಟ ಮೀನುಗಾರಿಕೆ ಉಪ ನಿರ್ದೇಶಕರುಗಳಿಗೆ – ಮೀನುಗಾರಿಕೆ ನಿರ್ದೇಶಕರ ಮುಖಾಂತರ.
7) ಆಂತರಿಕ ಆರ್ಥಿಕ ಸಲಹೆಗಾರರು, ಕೃ.ತೋ. ಮತ್ತು ಪ.ಸಂ.ಮೀ. ಇಲಾಖೆ.
8) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4), ವಿಧಾನಸೌಧ, ಬೆಂಗಳೂರು.
9) ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
10) ಮಾನ್ಯ ಪಶುಸಂಗೋಪನೆ ಮತ್ತು ಮೀನುಗಾರಿಕೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
11) ಶಾಖಾ ರಕ್ಷಾ ಕಡತ / ಸಮನ್ವಯ-ಕಂಪೆಂಡಿಯಮ್ / ಹೆಚ್ಚುವರಿ ಪ್ರತಿಗಳು.